ಕರ್ನಾಟಕ ಸರ್ಕಾರ

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದ.ಕ., ಮಂಗಳೂರು – 575001.**

**Deputy Commissioner & District Magistrate's Office, Dakshina Kannada, Mangaluru-575001.**

ನಂ. ಎಂಎಜಿ(2)ಸಿಆರ್ 415/2016-17/ಸಿ4

ದಿನಾಂಕ:09-09-2016

## ಅಧಿಕೃತ ಜ್ಞಾಪನಾ

ವಿಷಯ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಲಾ ಕಾಲೇಜುಗಳಿಗೆ ದಿನಾಂಕ:12-09-2016 ರಂದು ಸಾರ್ವತ್ರಿಕ ರಜೆಯನ್ನು ಘೋಷಿಸುವ ಬಗ್ಗೆ.

ಉಲ್ಲೇಖ: 1)ಸರ್ಕಾರದ ಅಧಿಸೂಚನೆ ಸಂ. ಸಿಆಸುಇ 32 ಹೆಚ್ ಹೆಚ್ ಎಲ್ ದಿನಾಂಕ:07-09-2016

2)ಶ್ರೀ ಯೆನಪೋಯ ಅಬ್ದುಲ್ಲಾ ಕುಂಞ, ಮಸ್ಜಿದ್ ಝೀನತ್ ಬಕ್ಷ್ ಮತ್ತು ಈದ್ಗಾ ಜುಮಾ ಮಸ್ಜಿದ್, ಮಂಗಳೂರು ಇವರ ಮನವಿ ದಿನಾಂಕ: 07-09-2016

==============

ಸರಕಾರವು ಉಲ್ಲೇಖ (1) ರ ಅಧಿಸೂಚನೆಯಲ್ಲಿ ಬಕ್ರೀದ್ ಹಬ್ಬದ ಆಚರಣೆಯ ಪ್ರಯುಕ್ತ ದಿನಾಂಕ:13-09-2016 ರಂದು ಸಾರ್ವತ್ರಿಕ ರಜೆಯನ್ನು ಘೋಷಿಸಿ ಆದೇಶಿಸಿರುತ್ತದೆ.

ಉಲ್ಲೇಖ (2) ರ ಮನವಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಸ್ಲಿಂ ಬಾಂಧವರು ಈದ್-ಉಲ್-ಅಜ್ಹಾ (ಬಕ್ರೀದ್) ಹಬ್ಬವನ್ನು ಸಪ್ಟೆಂಬರ್ 12 ರಂದು ಆಚರಿಸುತ್ತಿರುವುದರಿಂದ ಜಿಲ್ಲೆಯಲ್ಲಿ ಸಾರ್ವತ್ರಿಕ ರಜೆಯನ್ನು ದಿನಾಂಕ:12-09-2016 ರಂದು ಘೋಷಿಸುವಂತೆ ಕೋರಿರುತ್ತಾರೆ. ಆದರೆ ಸಾರ್ವತ್ರಿಕ ರಜೆಯನ್ನು ಸರ್ಕಾರದಿಂದ ಘೋಷಿಸಬೇಕಿರುತ್ತದೆ.

ಅದಾಗ್ಯೂ, ಈ ವಿಚಾರದ ಬಗ್ಗೆ ಪರಿಶೀಲಿಸಲಾಗಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಸ್ಲಿಂ ಬಾಂಧವರು ದಿನಾಂಕ:12-09-2016 ರಂದು ಬಕ್ರೀದ್ ಹಬ್ಬವನ್ನು ಆಚರಿಸುತ್ತಿರುವುದರಿಂದ, **ಡಾ.ಕೆ.ಜಿ.ಜಗದೀಶ, ಭಾ.ಆ.ಸೇ., ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಆದ ನಾನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ದಿನಾಂಕ:12-09-2016 ರಂದು ರಜೆ ನೀಡುವುದು ಸೂಕ್ತ ಎಂದು ಭಾವಿಸಿ, **ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಿಗೆ ಮಾತ್ರ ದಿನಾಂಕ:12-09-2016 ರಂದು ರಜೆಯನ್ನು ಘೋಷಿಸಿರುತ್ತೇನೆ ಹಾಗೂ ದಿನಾಂಕ:13-09-2016 ರಂದು ಎಲ್ಲಾ ಶಾಲಾ ಕಾಲೇಜುಗಳು ಎಂದಿನಂತೆ ಕರ್ತವ್ಯ ನಿರ್ವಹಿಸುವುದು.**

9/9/16

ಡಾ.ಕೆ.ಜಿ.ಜಗದೀಶ,ಭಾ.ಆ.ಸೇ.,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

ರಿಗೆ,

1)ಉಪ ಕುಲಪತಿಗಳು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು
2)ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ದ.ಕ ಮಂಗಳೂರು
3)ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ದ.ಕ ಮಂಗಳೂರು
4)ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ದ.ಕ ಮಂಗಳೂರು
5)ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಂಗಳೂರು